# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **878**
**ಮಾನ್ಯ ಸದಸ್ಯರ ಹೆಸರು** : **ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಉತ್ತರಿಸುವ ದಿನಾಂಕ** : **21.09.2022**
**ಉತ್ತರಿಸುವ ಸಚಿವರು** : **ಮಾನ್ಯ ಕಂದಾಯ ಸಚಿವರು.**

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಅಗತ್ಯವಿರುವ ಗ್ರಾಮ ಕರಣಿಕರ ಸಂಖ್ಯೆ ಎಷ್ಟು; ಪ್ರಸ್ತುತ ಲಭ್ಯವಿರುವ ಗ್ರಾಮ ಕರಣಿಕರ ಸಂಖ್ಯೆ ಎಷ್ಟು; ಕೊರತೆಯಿರುವ ಗ್ರಾಮ ಕರಣಿಕರನ್ನು ನೇಮಿಸಲು ಯೋಚನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ನೇಮಿಸುವುದು ಯಾವಾಗ; (ವಿವರ ನೀಡುವುದು)</td><td>ರಾಜ್ಯದ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿರುವ ಗ್ರಾಮಲೆಕ್ಕಿಗರ ಹುದ್ದೆಗಳ ವಿವರ ಈ ಕೆಳಕಂಡಂತಿದೆ:<br><table><tr><th>ಮಂಜೂರಾದ ಹುದ್ದೆಗಳು</th><th>ಭರ್ತಿ</th><th>ಖಾಲಿ</th></tr><tr><td>9834</td><td>7794</td><td>2039</td></tr></table><br>ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಆದ್ಯತೆಯ ಮೇಲೆ ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.</td></tr>
<tr><td>(ಆ)</td><td>ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ಖಾಲಿಯಿರುವ ಪ್ರಥಮ ದರ್ಜೆ ಸಹಾಯಕರ ಸಂಖ್ಯೆ ಎಷ್ಟು; ಕೊರತೆಯಿರುವ ಪ್ರಥಮ ದರ್ಜೆ ಸಹಾಯಕರನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ ಯಾವಾಗ ನೇಮಿಸಲಾಗುವುದು; (ವಿವರ ನೀಡುವುದು)</td><td>ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ 3090 ಸಂಖ್ಯೆಯ ರಾಜಸ್ವ ನಿರೀಕ್ಷಕರು/ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 157 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳು ಖಾಲಿ ಇರುತ್ತವೆ.<br><br>ಖಾಲಿ ಇರುವ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಕಾಲಕಾಲಕ್ಕೆ ನಿಯಮಾನುಸಾರ ಮುಂಬಡ್ತಿಗೆ ಅರ್ಹತೆ ಹೊಂದಿರುವ ಗ್ರಾಮಲೆಕ್ಕಿಗರು/ ದ್ವಿತೀಯ ದರ್ಜೆ ಸಹಾಯಕರನ್ನು ಮುಂಬಡ್ತಿ ಮೂಲಕ ಭರ್ತಿಗೊಳಿಸಲು ಕ್ರಮವಹಿಸಲಾಗುತ್ತಿದೆ. ಇನ್ನುಳಿದಂತೆ ಕೆ.ಪಿ.ಎಸ್.ಸಿ ಮೂಲಕ ನೇರ ನೇಮಕಾತಿ ಹಾಗೂ ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.</td></tr>
<tr><td>(ಇ)</td><td>ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಗ್ರಾಮ ಕರಣಿಕರನ್ನು ನಿಯೋಜಿಸುತ್ತಿದ್ದು, ಇದರಿಂದ ಗ್ರಾಮ ಕರಣಿಕರ ಹುದ್ದೆಗೆ ಹೆಚ್ಚುವರಿ ಪ್ರಭಾರ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ಪರಿಹರಿಸಲು ಸರ್ಕಾರ ಕೈಗೊಳ್ಳಲಾದ ಕ್ರಮಗಳೇನು? (ವಿವರ ನೀಡುವುದು)</td><td>ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಯಾವುದೇ ಗ್ರಾಮಲೆಕ್ಕಿಗರನ್ನು ನಿಯೋಜಿಸಿರುವುದಿಲ್ಲ.</td></tr>
</table>

**ಸಂಖ್ಯೆ:** ಕಂಇ 396 ಬಿಎಸ್‌ಸಿ 2022

**(ಆರ್. ಅಶೋಕ)**
**ಕಂದಾಯ ಸಚಿವರು**